ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಬಾಗಲಕೋಟೆ ತಾಲ್ಲೂಕಿನ "ಕಲಾದಗಿ" ಗ್ರಾಮ ಪಂಚಾಯತಿಯನ್ನು "ಪಟ್ಟಣ ಪಂಚಾಯತಿ"ಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು

ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ):-

946(1036) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಗಳನ್ನು "ಪಟ್ಟಣ ಪಂಚಾಯತಿ"ಗಳನ್ನಾಗಿ ಮೇಲ್ದರ್ಜೆಗೇರಿಸುವ ಸಂದರ್ಭದಲ್ಲಿ ಅನುಸರಿಸುವ ನಿಯಮಗಳೇನು;

(ಆ) ಕಳೆದ 02 ವರ್ಷಗಳಲ್ಲಿ ರಾಜ್ಯಾದ್ಯಂತ ಎಷ್ಟು ಗ್ರಾಮ ಪಂಚಾಯತಿಗಳನ್ನು "ಪಟ್ಟಣ ಪಂಚಾಯತಿ"ಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಗಲಕೋಟೆ ಜಿಲ್ಲೆಯ ಎಷ್ಟು ಗ್ರಾಮ ಪಂಚಾಯತಿಗಳನ್ನು "ಪಟ್ಟಣ ಪಂಚಾಯತಿ"ಗಳನ್ನಾಗಿ ಮೇಲ್ದರ್ಜೆಗೇರಿಸಲು ಮನವಿಗಳು ಸ್ವೀಕೃತವಾಗಿವೆ; (ಸಂಪೂರ್ಣ ವಿವರ ನೀಡುವುದು)

(ಈ) ಬೀಳಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಾಗಲಕೋಟೆ ತಾಲ್ಲೂಕಿನ "ಕಲಾದಗಿ" ಗ್ರಾಮ ಪಂಚಾಯಿತಿಯನ್ನು "ಪಟ್ಟಣ ಪಂಚಾಯಿತಿ"ಯನ್ನಾಗಿ ಮೇಲ್ದರ್ಜೆಗೇರಿಸಬೇಕೆಂಬ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ಗ್ರಾಮ ಪಂಚಾಯಿತಿಯನ್ನು "ಪಟ್ಟಣ ಪಂಚಾಯತಿ"ಯನ್ನಾಗಿ ಇಲ್ಲಿಯವರೆಗೂ ಮೇಲ್ದರ್ಜೆಗೇರಿಸದಿರಲು ಕಾರಣಗಳೇನು ;

(ಊ) ಯಾವ ಕಾಲಮಿತಿಯಲ್ಲಿ "ಪಟ್ಟಣ ಪಂಚಾಯತಿ"ಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು ?